ಸಂಪುಟ : 9 ಸಂಚಿಕೆ 173 ಪುಟ : 4 ಬೆಲೆ: 3.00 ಗುರುವಾರ ಆಗಸ್ಟ್ 15 2024 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 9 Issue : 173 Pages : 4 Price : 3.00 Thursday August 15 2024 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಇಂದಿನ ನೀರು ಪೂರೈಕೆ ವಿವರ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ-ಬೆಟಗೇರಿ ಅವಳಿ ನಗರದಲ್ಲಿ ಆಗಸ್ಟ್ 15ರಂದು ಈ ಕೆಳಗಿನ ಸ್ಥಳಗಳಿಗೆ ನೀರು ಪೂರೈಕೆ ಮಾಡಲಾಗುವುದು ಎಂದು ನಗರಸಭೆ ಅಧಿಕಾರಿಗಳು ತಿಳಿಸಿದ್ದಾರೆ.

ಸ್ಥಳಗಳ ವಿವರ ವಾರ್ಡ್ ನಂ. 22 ವಿಜಯನಗರ ಶಾಲೆ, ವಾಲ್ಮೀಕಿ ಭವನ, ಶಿಗ್ಗಾವಿ ಲೇಔಟ್, ಕಮತರ ಪ್ಲಾಟ್, ಕರುಗಲ್ ಲೇಔಟ್, ಟವರ್ ಕಂಬ, ಗಾರ್ಡನ ಲೈನ್, ಉಳಿದ ಕೆಲವು ಭಾಗಗಳು. ವಾರ್ಡ್ ನಂ. 29 ಪಂಚಾಕ್ಷರಿ ನಗರ 3 ಮತ್ತು 5 ನೇ ಕ್ರಾಸ್. ವಾರ್ಡ್ ನಂ. 33 ಪಂಚಮುಖಿ ದೇವಸ್ಥಾನ, ಪವಾರ ಲೈನ್, ಬೆಲ್ಲದವರ ಲೈನ್, ಕೇಶವ ನಗರ ಭಾಗ -1,2 ಮುಳಗುಂದ ರೋಡ್, ವೀರೇಶ್ವರ ನಗರ, ಕರಿಗೌಡ್ರ ಲೈನ್, ಜಾಕೀರ್ ಹುಸೇನ ಕಾಲೋನಿ.

ವಾರ್ಡ್ ನಂ. 8, 10, 9 ಕುಲಕರ್ಣಿ ಲೈನ್, ಹದ್ದಣ್ಣವರ ಲೈನ್, ಕಬಾಡಿ ರೋಡ್, ಭಾಗ-1,2 ತೆಗ್ಗಿನ ಲಾಟ್, 9 ನಂಬರ ಶಾಲೆ, ಮಜ್ಜಿಗೆ ಓಣಿ, ಶಿರಹಟ್ಟಿ ಓಣಿ, ಚಿದಂಬರ ಆಶ್ರಮ, ಚರ್ಚ್ ಲೈನ, ನವಗ್ರಹ ಗುಡಿ, ಗಣಪತಿ ಗುಡಿ, ಹೆಲ್ತ್ ಕ್ಯಾಂಪ್, ಕುರಹಟ್ಟಿ ಪೇಟೆ, ಪೊಲೀಸ್ ಕ್ವಾರ್ಟರ್ಸ್ ಉಳಿದ ಕೆಲವು ಭಾಗಗಳು.

ತುಂಗಭದ್ರಾ ನದಿಯಿಂದ ಪೂರೈಕೆ ಮಾಡಿದ ನೀರನ್ನು ಸಂಗ್ರಹಣೆ ಮಾಡಿದ ನಂತರ ಹೊಸ ನೀರು ಸಂಗ್ರಹವಾಗಿರುವುದರಿಂದ ಕಡ್ಡಾಯವಾಗಿ ಕಾಯಿಸಿ ಆರಿಸಿ ಕುಡಿಯಲು ಉಪಯೋಗಿಸತಕ್ಕದ್ದು ಎಂದು ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬಿಜೆಪಿ ಯುವ ಮೋರ್ಚಾದಿಂದ ಬೈಕ್ ರ್‍ಯಾಲಿ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತೀಯ ಜನತಾ ಪಾರ್ಟಿ ಗದಗ ಗ್ರಾಮೀಣ ಮಂಡಲ ಯುವ ಮೋರ್ಚಾ ವತಿಯಿಂದ ಶಿರುಂದ ಗ್ರಾಮದಿಂದ ಎಲಿಶಿರುಂಧ ಗ್ರಾಮದವರೆಗೆ ತಿರಂಗಾ ಯಾತ್ರಾ ಬೈಕ್ ರ್‍ಯಾಲಿ ಮಾಡಲಾಯಿತು.

ಯುವ ಮೋರ್ಚಾ ಗದಗ ಜಿಲ್ಲಾಧ್ಯಕ್ಷ ಸಂತೋಷ ಅಕ್ಕಿ ಸಾಂದರ್ಭಿಕವಾಗಿ ಮಾತನಾಡಿದರು. ಈ ಸಂದರ್ಭದಲ್ಲಿ ಗ್ರಾಮೀಣ ತಿರಂಗಾ ಯಾತ್ರಾ ಸಂಚಾಲಕರಾದ ಬೂದಪ್ಪ ಹಳ್ಳಿ, ಬಾಬು ಸುಂಕದ, ವಾಯ್.ಪಿ. ಅಡ್ನೂರ, ಬಾಬು ಸುಂಕದ, ಜಗದೀಶ ಚಿಂಚಲಿ, ಅರವಿಂದ ಅಣ್ಣಿಗೇರಿ, ಸುರೇಶ ಚವ್ಹಾಣ, ಹನಮಂತಪ್ಪ ಗೊಡ್ಕೆ, ಮಲ್ಲಿಕಾರ್ಜುನ ಕಳಸಾಪೂರ, ಅಭಿಷೇಕ ಹಿರೇಮಠ, ಶಿವು ಕುರ್ತಕೋಟಿ, ಮಂಜು ಶಿರಹಟ್ಟಿ, ಪ್ರಕಾಶ ಮಠದ, ಹುಯಿಲಗೋಳ, ಕಾಳು ತೊಟದ, ಶೇಖಣ್ಣಿ ಶಿರಹಟ್ಟಿ, ನಿಂಗಪ್ಪ ಶಿರಹಟ್ಟಿ ಮುಂತಾದವರಿದ್ದರು.

### ಸ್ವಾತಂತ್ರ್ಯ ಮಹೋತ್ಸವದ ಅಂಗವಾಗಿ ಹರ್ ಘರ್ ತಿರಂಗಾ ಅಭಿಯಾನ

# ದೇಶವನ್ನು ಪ್ರಗತಿ ಪಥದೆಡೆ ಮುನ್ನಡೆಸೋಣ

■ವಿಜಯಸಾಕ್ಷಿ ಸುದ್ದಿ, ಗದಗ

ಅನೇಕ ಸ್ವಾತಂತ್ರ್ಯ ಹೋರಾಟಗಾರರ, ದೇಶಭಕ್ತರ ತ್ಯಾಗ-ಬಲಿದಾನದಿಂದ ನಮ್ಮ ದೇಶಕ್ಕೆ ಸ್ವಾತಂತ್ರ್ಯ ದೊರಕಿದೆ. ಎಲ್ಲ ಸ್ವಾತಂತ್ರ್ಯ ಹೋರಾಟಗಾರರನ್ನು ಸ್ಮರಿಸುವ ಮೂಲಕ ನಾವಿಂದು ಶಾಂತಿ, ಸೌಹಾರ್ದತೆ ಮತ್ತು ಭ್ರಾತೃತ್ವವನ್ನು ಎತ್ತಿ ಹಿಡಿದು ದೇಶವನ್ನು ಅಭಿವೃದ್ಧಿ ಪಥದೆಡೆಗೆ ಮುನ್ನಡೆಸಬೇಕು ಎಂದು ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಹೇಳಿದರು.

ಅವರು ಬುಧವಾರ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಆಜಾದಿ ಕಾ ಅಮೃತ ಮಹೋತ್ಸವದ ಅಂಗವಾಗಿ ಗದಗ ಜಿಲ್ಲೆಯಲ್ಲಿ ಹರ್ ಘರ್ ತಿರಂಗಾ ಅಭಿಯಾನದ ಪ್ರಯುಕ್ತ ವಾಕಥಾನ್‌ಗೆ ಚಾಲನೆ ನೀಡಿ ಮಾತನಾಡಿದರು.

ದೇಶಭಕ್ತಿ ಗೀತೆಗಳ ನಿನಾದದೊಂದಿಗೆ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ತಿರಂಗಾ ಅಭಿಯಾನವು ಪ್ರಾರಂಭವಾಗಿ ನಗರದ ಪ್ರಮುಖ ವೃತ್ತಗಳಲ್ಲಿ ಸಂಚರಿಸಿ ಗಾಂಧಿ ವೃತ್ತಕ್ಕೆ ಬಂದು ತಲುಪಿತು. ಹೆಚ್ಚುವರಿ ಜಿಲ್ಲಾಧಿಕಾರಿ ಅನ್ನಪೂರ್ಣ ಮುದುಕಮ್ಮನವರ ಅವರು ಸಂವಿಧಾನದ ಪೀಠಿಕೆಯನ್ನು ಪಠಿಸಿದರು. ವಾಕಥಾನ್‌ನಲ್ಲಿ ಶಾಲಾ ಮಕ್ಕಳ ವಿವಿಧ ಸ್ವಾತಂತ್ರ್ಯ ಹೋರಾಟಗಾರರ ವಿವಿಧ ರೂಪಕಗಳು ಕಣ್ಮನ ಸೆಳೆದವು.

ವಾಕಥಾನ್‌ವು ಎನ್‌ಸಿಸಿ, ಎನ್‌ಎಸ್‌ಎಸ್, ಮಾಜಿ ಸೈನಿಕರ ಸಂಘ, ಸ್ಕೌಟ್ಸ್ ಮತ್ತು ಗೈಡ್ಸ್, ಪೊಲೀಸ್ ಇಲಾಖೆ, ಶಾಲಾ-ಕಾಲೇಜಗಳ ಸಹಕಾರದೊಂದಿಗೆ ಯಶಸ್ವಿಯಾಗಿ ಜರುಗಿತು.

ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ ಎಸ್, ಉಪವಿಭಾಗಾಧಿಕಾರಿ ಗಂಗಪ್ಪ. ಎಂ, ತಹಸೀಲ್ದಾರ ಶ್ರೀನಿವಾಸ ಕುಲಕರ್ಣಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ ಬಿ, ಯುವಜನ ಸಬಲೀಕರಣ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿ ರವಿ ಗುಂಜೀಕರ್, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ಹಾಜರಿದ್ದರು.



> ನಾವಿಂದು ಶಾಂತಿ, ಸೌಹಾರ್ದತೆಗೆ ಹಾಗೂ ಭ್ರಾತೃತ್ವಕ್ಕೆ ಹೆಚ್ಚಿನ ಒತ್ತು ನೀಡುವ ಮೂಲಕ ಸದೃಢ ಸಮಾಜವನ್ನು ನಿರ್ಮಿಸಬೇಕು. ಈ ನಿಟ್ಟಿನಲ್ಲಿ ದೇಶದ ಎಲ್ಲ ಪ್ರಜೆಗಳೂ ಈ ಕಾರ್ಯಕ್ಕೆ ಕೈ ಜೋಡಿಸಬೇಕು ಎಂದು ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್. ಕೆ.ಪಾಟೀಲ ತಿಳಿಸಿದರು.






## ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಸವಿತಾ ಮತ್ತು ಅದರ ಉಪಜಾತಿಗಳಿಗೆ ಸೇರಿದ ಜನಾಂಗಗಳಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ ಸೇರಿದಂತೆ ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿರುತ್ತದೆ.

ಅರ್ಜಿಗಳನ್ನು ಸೇವಾಸಿಂಧು ಪೋರ್ಟಲ್ www.kasd.karnataka.gov.in ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದಾಗಿದೆ. ನಿಗಮದ ಸಹಾಯವಾಣಿ ಸಂಖ್ಯೆ 080–22374832 ಮತ್ತು 8050770004 ಅಥವಾ 8050770005 ಆಯಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿದ್ದು, ಅದರಂತೆ ಸಂಪರ್ಕಿಸಬಹುದಾಗಿದೆ.

## ಮಡಿವಾಳ ಮಾಚಿದೇವ ಅಭಿವೃದ್ಧಿ ನಿಗಮದಿಂದ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಹಿಂದುಳಿದ ವರ್ಗಗಳ ಪ್ರವರ್ಗ–2ಎಗೆ ಸೇರಿದ ಮಡಿವಾಳ ಮತ್ತು ಅದರ ಉಪಜಾತಿಗಳಿಗೆ ಸೇರಿದ ಜನರಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿಅರ್ಜಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದೆ.

ಅರ್ಜಿಗಳನ್ನು ಸೇವಾ ಸಿಂಧು ಪೋರ್ಟಲ್ http://sevasindhu.karnataka.gov.in ಮುಖಾಂತರ ಗ್ರಾಮಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್‌ಲೈನ್ ಮೂಲಕ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ. ನಿಗಮದ ವೆಬ್ ಸೈಟ್ ತಿತಿತಿ.ಇಟಟಜ.ಇಚಿಡಿಟಿಚಿಣಚಿಞಚಿ.ರಿಠತಿ.ಟಿ ಇಲ್ಲಿ ಸಂಪರ್ಕಿಸಿ ಹೆಚ್ಚಿನ ಮಾಹಿತಿ ಪಡೆಯಬಹುದು ಅಥವಾ ನಿಗಮದ ಸಹಾಯವಾಣಿ ಸಂಖ್ಯೆ 080–22374832 ಮತ್ತು 8050770004 ಅಥವಾ 8050770005 ಆಯಾ ಜಿಲ್ಲಾ ಕಚೇರಿಯ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್‌ನಲ್ಲಿ ನೀಡಲಾಗಿದ್ದು, ಅದರಂತೆ ಸಂಪರ್ಕಿಸಬಹುದಾಗಿದೆ.

## ಅಲೆಮಾರಿ ಅಭಿವೃದ್ಧಿ ನಿಗಮದಿಂದ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಅಲೆಮಾರಿ ಮತ್ತು ಅರೆ ಅಲೆಮಾರಿ ಅಭಿವೃದ್ಧಿ ನಿಗಮದಿಂದ 2024–25ನೇ ಸಾಲಿನಲ್ಲಿ ಗಂಗಾ ಕಲ್ಯಾಣ ನೀರಾವರಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ, ವಿದೇಶಿ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಸಾಲ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ವಿವಿಧ ಯೋಜನೆಗಳ ಸೌಲಭ್ಯಕ್ಕಾಗಿ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಆಗಸ್ಟ್ 31 ಕೊನೆಯ ದಿನವಾಗಿದ್ದು, ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಬೆಂಗಳೂರು ಒನ್ ಮತ್ತು ಕರ್ನಾಟಕ ಒನ್ ಸೇವಾ ಕೇಂದ್ರಗಳಲಿ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ನಿಗಮದ ವೆಬ್‌ಸೈಟ್ www.kaad.karnataka.gov.in ಇಲ್ಲಿ ಸಂಪರ್ಕಿಸಬಹುದಾಗಿದೆ.

## ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದಿಂದ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಒಕ್ಕಲಿಗ ಸಮುದಾಯ ಅಬಿವೃದ್ಧಿ ನಿಗಮದಿಂದ ಪ್ರಸಕ್ತ ಸಾಲಿನಲ್ಲಿ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ, ಗಂಗಾ ಕಲ್ಯಾಣ ನೀರಾವರಿ ಯೋಜನೆ, ಸ್ವಾವಲಂಬಿ ಸಾರಥಿ ಯೋಜನೆ, ಸ್ವಯಂ ಉದ್ಯೋಗ ಸಾಲ ಯೋಜನೆ, ಶೈಕ್ಷಣಿಕ ಸಾಲ ಯೋಜನೆ, ವಿದೇಶ ವಿಶ್ವ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗ ಸಾಲ ಯೋಜನೆ, ಸ್ವಾತಂತ್ರ್ಯ ಮಹೋತ್ಸವದ ಅಮೃತ ಮುನ್ನಡೆ ಯೋಜನೆಯ ಕೌಶಲ್ಯಾಭಿವೃದ್ಧಿ ತರಬೇತಿ ಸೌಲಭ್ಯಗಳಿಗೆ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸಲು ಆಗಸ್ಟ್ 30 ಕೊನೆಯ ದಿನವಾಗಿದ್ದು, ಯೋಜನೆಯ ಅರ್ಹತೆ ಮತ್ತು ಸಲ್ಲಿಸುವ ದಾಖಲಾತಿಗಳ ಕುರಿತು ಹೆಚ್ಚಿನ ಮಾಹಿತಿಗಾಗಿ ಕರ್ನಾಟಕ ಒಕ್ಕಲಿಗ ಸಮುದಾಯ ಅಭಿವೃದ್ಧಿ ನಿಗಮದ ಜಾಲತಾಣ https://kvcdc.karnataka.gov.in ಅಥವಾ ನಿಗಮದ ಜಿಲ್ಲಾ ಕಚೇರಿ ದೂರವಾಣಿ ಸಂಖ್ಯೆ 08372–232327 ಹಾಗೂ 080–29904350, 29904268 ಸಂಪರ್ಕಿಸಬಹುದಾಗಿದೆ ಅಥವಾ ಆಯಾ ಜಿಲ್ಲೆಯ ಜಿಲ್ಲಾ ವ್ಯವಸ್ಥಾಪಕರು, ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಕಚೇರಿ ಸಂಪರ್ಕಿಸಬಹುದಾಗಿದೆ.

### ಜಿಲ್ಲಾ ಪೊಲೀಸರ ಸಮರ್ಥ ಕಾರ್ಯಾಚರಣೆ | ಒಟ್ಟು 112ಆರೋಪಿಗಳ ಬಂಧನ

# 2.43 ಕೋಟಿ ರೂ. ಸ್ವತ್ತು ವಶಕ್ಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ವಿವಿಧ ಠಾಣೆಗಳ ವ್ಯಾಪ್ತಿಯಲ್ಲಿ ಮನೆಗಳ್ಳತನ, ವಾಹನ, ಮೊಬೈಲ್ ಹಾಗೂ ಇನ್ನಿತರ ಕಳ್ಳತನ, ಮೋಸ–ವಂಚನೆ ಪ್ರಕರಣಕ್ಕೆ ಸಂಬಂಧಿಸಿದಂತೆ ಒಟ್ಟು 91 ಪ್ರಕರಣಗಳನ್ನು ಭೇದಿಸಿ, 2.43 ಕೋಟಿ ರೂ. ಮೌಲ್ಯದ ವಸ್ತುಗಳನ್ನು ಮೂಲ ಮಾಲೀಕರಿಗೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷಾಧಿಕಾರಿ ಬಿ.ಎಸ್. ನೇಮಗೌಡ ಮಾಹಿತಿ ನೀಡಿದರು.




ಬುಧವಾರ ಇಲ್ಲಿನ ನಗರದ ಸಂಭಾಪುರ ರಸ್ತೆಯಲ್ಲಿರುವ ಪೊಲೀಸ್ ಭವನದಲ್ಲಿ ಆರೋಪಿಗಳಿಂದ ವಶಪಡಿಸಿಕೊಂಡ ವಸ್ತುಗಳನ್ನು ಅವುಗಳ ವಾರಸುದಾರರಿಗೆ ಹಸ್ತಾಂತರಿ ಮಾತನಾಡಿದ ಅವರು, ಒಟ್ಟು 91 ಪ್ರಕರಣಕ್ಕೆ ಸಂಬಂಧಿಸಿದಂತೆ 112 ಜನರನ್ನು ಬಂಧಿಸಲಾಗಿದೆ. ಇದರಲ್ಲಿ ಬೇರೆ ಬೇರೆ ರಾಜ್ಯ, ಜಿಲ್ಲೆಗಳ ಕಳ್ಳರೂ ಸೇರಿದ್ದಾರೆ ಎಂದು ತಿಳಿಸಿದರು.

ಬಂಧಿತ ಒಟ್ಟೂ 112 ಆರೋಪಿಗಳಿಂದ 1.62 ಕೋಟಿ ರೂ. ಮೌಲ್ಯದ ಬಂಗಾರ, ಬೆಳ್ಳಿ ಹಾಗೂ ನಗದು ವಶಪಡಿಸಿಕೊಳ್ಳಲಾಗಿದೆ. ಅಂತೆಯೇ 80.80 ಲಕ್ಷ ರೂ. ಮೌಲ್ಯದ 477 ಮೊಬೈಲ್‌ಗಳನ್ನು ಪತ್ತೆಹಚ್ಚಲಾಗಿದೆ. ಒಟ್ಟಾರೆ 2.43 ಕೋಟಿ ರೂ. ಮೌಲ್ಯದ ಸ್ವತ್ತುಗಳನ್ನು ಮರಳಿಸಲಾಗಿದೆ. ಜಿಲ್ಲೆಯ ಎಲ್ಲ ಪೊಲೀಸ್ ಠಾಣೆ ವ್ಯಾಪ್ತಿಯ 48 ಮನೆ ಕಳ್ಳತನ ಪ್ರಕರಣ, 30 ವಾಹನ ಕಳ್ಳತನ ಪ್ರಕರಣ ಹಾಗೂ 7 ಇತರೆ ಕಳ್ಳತನ ಪ್ರಕರಣ, 6 ಮೋಸ–ವಂಚನೆ ಪ್ರಕರಣ ಪತ್ತೆ ಮಾಡಲಾಗಿದೆ ಎಂದರು.

> ಸಿಇಆರ್ ಪೋರ್ಟಲ್ ಮೂಲಕ ಗದಗ ಜಿಲ್ಲಾ ಪೊಲೀಸರು ಅತ್ಯಧಿಕ ಮೊಬೈಲ್ ಫೋನ್‌ಗಳನ್ನು ಕಂಡುಹಿಡಿಯುತ್ತಿದ್ದಾರೆ. ರಾಜ್ಯದಲ್ಲಿಯೇ ಟಾಪ್ 5 ಒಳಗೆ ಮೊಬೈಲ್ ಪತ್ತೆಹಚ್ಚುವಲ್ಲಿ ನಮ್ಮ ಪೊಲೀಸರು ಪ್ರಯತ್ನ ಪಟ್ಟಿದ್ದಾರೆ. ಅಂತರ್ ರಾಜ್ಯ ಹಾಗೂ ಅಂತರ ಜಿಲ್ಲಾ ಕಳ್ಳರು ಈ ಪ್ರಕರಣದಲ್ಲಿ ಭಾಗಿಯಾಗಿದ್ದಾರೆ. ಪ್ರಕರಣಗಳನ್ನು ಭೇದಿಸುವಲ್ಲಿ ಪ್ರಮುಖ ಪಾತ್ರವಹಿಸಿದ ಪೊಲೀಸ್ ಸಿಬ್ಬಂದಿಗಳಿಗೆ ಸೂಕ್ತ ಬಹುಮಾನಗಳನ್ನು ನೀಡಲಾಗುವುದು.
>
> – ಬಿ.ಎಸ್. ನೇಮಗೌಡ.
> ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ.

ಜಿಲ್ಲೆಯ ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ, ಡಿಎಸ್‌ಪಿ ಜೆ.ಎಚ್. ಇನಾಮದಾರ, ಪ್ರಭುಗೌಡ ಕಿರೇದಳ್ಳಿ ಮಾರ್ಗದರ್ಶನದಲ್ಲಿ ಜಿಲ್ಲೆಯ ಎಲ್ಲ ಪೊಲೀಸ್ ಠಾಣೆಯ ಸಿಪಿಐ, ಪಿಎಸ್‌ಐ, ಅಪರಾಧ ದಳದ ಸಿಬ್ಬಂದಿ ಹಾಗೂ ಇನ್ನಿತರ ಎಲ್ಲ ಸಿಬ್ಬಂದಿಗಳ ಪ್ರಯತ್ನದಿಂದ ಅಲ್ಪ ಅವಧಿಯಲ್ಲಿ ಅನೇಕ ಪ್ರಕರಣಗಳನ್ನು ಭೇದಿಸಲು ಸಾಧ್ಯವಾಗಿದೆಸೀ ಕಾರ್ಯದಲ್ಲಿ ಯಶಸ್ವಿಯಾದ ಜಿಲ್ಲಾ ಪೊಲೀಸ್ ಸಿಬ್ಬಂದಿಗಳಿಗೆ ಸೂಕ್ತ ಬಹುಮಾನ ಘೋಷಣೆ ಮಾಡಲಾಗುವುದು ಎಂದು ತಿಳಿಸಿದರು.

### ಆಗಸ್ಟ್ 15, ಸ್ವಾತಂತ್ರ್ಯೋತ್ಸವದ ನಿಮಿತ್ತ ನಮ್ಮ ರಾಷ್ಟ್ರಧ್ವಜದ ಹಿನ್ನೆಲೆ ಅರಿಯೋಣ

# ದಣಿವರಿಯದ ಹೋರಾಟಗಾರ್ತಿ ಭಿಕಾಜಿ ಕಾಮಾ



ಪ್ರಥಮ ರಾಷ್ಟ್ರಧ್ವಜ ಕೊಟ್ಟ ಮೇಡಂ ಭಿಕಾಜಿ ಕಾಮಾ 1861ರ ಸೆಪ್ಟೆಂಬರ್ 24ರಂದು ಜನಿಸಿದ ಭಾರತದ ರಾಷ್ಟ್ರೀಯ ಆಂದೋಲನದ ಪ್ರಮುಖ ಹೋರಾಟಗಾರ್ತಿ. ಇವರು ಪಾರ್ಸಿ ಕುಟುಂಬದಲ್ಲಿ ದೇಶಕ್ಕಾಗಿ ಹೋರಾಡಿದ ದೇಶವೇ ನನ್ನ ಮನೆ ಎಂದು ನಂಬಿದ ಕುಟುಂಬದಲ್ಲಿ ಬೆಳೆದವರು. ನಮ್ಮ ರಾಷ್ಟ್ರಧ್ವಜ ಹೇಗಿರಬೇಕೆಂದು ಕಲ್ಪನೆ ಮಾಡಿ ಸೃಷ್ಟಿಸಿದ ಧೀಮಂತ ದೇಶಭಕ್ತೆ. ಇವರ ತಂದೆ ಸೊರಾಬ್ಜಿ ಫ್ರಾಮಜಿ ಪಟೇಲ್ ವ್ಯಾಪಾರಿಯಾಗಿದ್ದರು. ಭಿಕಾಜಿ ಕಾಮಾ ಅವರ ಶಿಕ್ಷಣವು ಮುಂಬೈಯ ಎಲೆಕ್ಸಾಂಡ್ರಾ ಆರ್ಸಿ ಗರ್ಲ್ಸ್ ಸ್ಕೂಲಿನಲ್ಲಾಯಿತು. ವಿದ್ಯಾರ್ಥಿ ದಿಸೆಯಲ್ಲಿ ಅವರು ಆದರ್ಶ ಮತ್ತು ನೇರನುಡಿಯ ವಿದ್ಯಾರ್ಥಿನಿಯಾಗಿದ್ದರು. ಮುಂದೆ, ಖ್ಯಾತ ವಕೀಲಾರಾದ ರುಸ್ತುಂ ಅವರೊಂದಿಗೆ ವಿವಾಹ ಆಯಿತು.

1905ರಲ್ಲಿ ಶಾಮಜಿ ಕೃಷ್ಣವರ್ಮಾ ಅವರ ಆರಂಭಿಸಿದ ಇಂಡಿಯನ್ ಹೋಮ್ ಸೊಸೈಟಿಯ ಸ್ಥಾಪನೆಯಲ್ಲಿ ಸಹಯೋಗ ನೀಡಿದರು. ಭಾರತದ ರಾಷ್ಟ್ರೀಯ ಆಂದೋಲನದಲ್ಲಿ ಭಾಗವಹಿಸುತ್ತಿರುವದನ್ನು ಕಂಡು ಬ್ರಿಟಿಷ್ ಸರ್ಕಾರ ರೊಚ್ಚಿಗೆದ್ದಿತು. ಭಾರತದ ರಾಷ್ಟ್ರೀಯ ಆಂದೋಲನದಲ್ಲಿ ನಾನು ಭಾಗವಹಿಸುವುದಿಲ್ಲ ಎಂಬ ಮುಚ್ಚಳಿಕೆ ಬರೆದುಕೊಡುವವರೆಗೆ ಅವರು ಭಾರತಕ್ಕೆ ಹಿಂದಿರುಗವಂತಿಲ್ಲ ಎಂಬ ಷರತ್ತನ್ನು ಬ್ರಿಟಿಷ್ ಸರಕಾರ ವಿಧಿಸಿತು. ಆದರೆ ಮೇಡಂ ಕಾಮಾ ಹಾಗೆ ಮುಚ್ಚಳಿಕೆ ಬರೆದುಕೊಡಲು ನಿರಾಕರಿಸಿದರು. ಲಂಡನ್ನಿನಲ್ಲಿ ಇದ್ದುಕೊಂಡೇ ತಮ್ಮ ರಾಜಕೀಯ ಚಟುವಟಿಕೆಗಳನ್ನು ಮುಂದುವರೆಸಿದರು.

1897ರಲ್ಲಿ ಮುಂಬೈಯಲ್ಲಿ ಭೀಕರ ಪ್ಲೇಗ್ ರೋಗವು ಹರಡಿತು, ಜನರು ರೋಗದಿಂದ ಸಾಯತೊಡಗಿದರು. ಜನರ ರೋಗ–ನೋವುವನ್ನು ನೋಡಿ ಸ್ವತಃ ಕಾಮಾ ಆರೋಗ್ಯವನ್ನು ಲೆಕ್ಕಿಸದೆ ಜನರ ಶುಶ್ರೂಷೆಯಲ್ಲಿ ತೊಡಗಿದರು. ಇದರಿಂದ ಮೇಡಂ ಕಾಮಾರವರಿಗೆ ಪ್ಲೇಗ್ ರೋಗವು ತಗುಲಿತು. ತಮ್ಮ ಚಿಕಿತ್ಸೆಗಾಗಿ ಲಂಡನ್ನಿಗೆ ಬಂದರು. ಅಲ್ಲಿ ಲಂಡನ್ನಿನಲ್ಲಿದ್ದ ಶಾಮಜಿ ಕೃಷ್ಣವರ್ಮಾರವರಿಗೆ ಕಾಮಾ ಮೇಡಂ ಪರಿಚಯವಾಯಿತು. ಭಾರತದ ರಾಷ್ಟ್ರೀಯ ಆಂದೋಲನದವನ್ನು ಕುರಿತು ಹೈಡ್ ಪಾರ್ಕಿನಲ್ಲಿ ಮಾಡುತ್ತಿದ್ದ ಭಾಷಣದಿಂದ ಮತ್ತು ಲಂಡನ್ನಿನಲ್ಲಿ ಕ್ರಾಂತಿಕಾರಕ ಭಾಷಣದಿಂದ ಮನೆಮಾತಾಗಿದ್ದರು. ಕೃಷ್ಣವರ್ಮಾರವರ ಸಹಕಾರದಿಂದ ಭಾರತದ ರಾಷ್ಟ್ರೀಯ ಕಾಂಗ್ರೆಸ್ಸಿನ ಸಂಪರ್ಕಕ್ಕೆ ಬಂದು ಅಂದಿನಿಂದ ದಾದಾಭಾಯಿ ನವರೋಜಿ ಭಾರತದ ರಾಷ್ಟ್ರೀಯ ಕಾಂಗ್ರೆಸ್ಸಿನ ಅಧ್ಯಕ್ಷರಾಗಿದ್ದರು. ಮೇಡಂ ಭಿಕಾಜಿ ಕಾಮಾ ದಾದಾಭಾಯಿ ನವರೋಜಿಯವರ ವಯಕ್ತಿಕ ಕಾರ್ಯದರ್ಶಿಯಾಗಿ ಕೆಲಸ ಮಾಡತೊಡುತ್ತ ಲಂಡನ್ನಿನಲ್ಲಿ ಇದ್ದುಕೊಂಡೇ ರಾಜಕೀಯ ಚಟುವಟಿಕೆಗಳನ್ನು ಮುಂದುವರಿಸಿದರು.

ಇಂಗ್ಲೆಂಡಿನಲ್ಲಿ ಭಾರತೀಯರಲ್ಲಿ ರಾಷ್ಟ್ರೀಯ ಆಂದೋಲನದ ಕಾವು ಹೆಚ್ಚುತ್ತಿರುವದುದನ್ನು ಕಂಡು ಬ್ರಿಟಿಷ ಸರಕಾರ ಕಾಮಾ ಅವರ ಹತ್ಯೆಗೆ ಸಂಚು ರೂಪಿಸಿತು. ಅದರ ಸುಳಿವು ದೊರೆತ ಕಾಮಾ ಪ್ಯಾರಿಸ್ಸಿಗೆ ಪಲಾಯನಗೈದರು. ಅಲ್ಲಿ ಅವರು ಪ್ಯಾರಿಸ್ ಇಂಡಿಯನ್ ಸೊಸೈಟಿ ಸ್ಥಾಪಿಸಿದರು. 1907ರಲ್ಲಿ ಜರುಗಿದ ಇಂಟರ್‌ನ್ಯಾಷನಲ್ ಸೊಷಲಿಸ್ಟ್ ಕಾನ್ಫರೆನ್ಸನಲ್ಲಿ ಭಾಗವಹಿಸಿ ಭಾರತದಲ್ಲಿ ಉಂಟಾಗಿರುವ ಬರ ಮತ್ತು ಬರ ಪರಿಹಾರದ ವಿಷಯದಲ್ಲಿ ಬ್ರಿಟಿಷರು ತೋರುತ್ತಿದ್ದ ನಿರ್ಲಕ್ಷವನ್ನು ಗಮನಿಸಿ ಇದೇ ಸಮ್ಮೇಳನದಲ್ಲಿ ಅವರ ಧ್ವಜವೊಂದನ್ನು ರೂಪಿಸಿ ಹಾರಿಸಿದರು. ಅದೇ ಧ್ವಜ ಮುಂದೆ ಭಾರತದ ರಾಷ್ಟ್ರೀಯ ಧ್ವಜವಾಗಿ ರೂಪಗೊಳ್ಳುವುದಕ್ಕೆ ಪ್ರೇರಣೆ ಆಯಿತು.

ಅವರು ರೂಪಿಸಿದ ಧ್ವಜದಲ್ಲಿ ಹಸಿರು, ಕೇಸರಿ ಹಾಗೂ ಕೆಂಪು ಬಣ್ಣಗಳಿದ್ದವು. ಮೇಲೆ ಹಸಿರು ಬಣ್ಣದಲ್ಲಿ ಎಂಟು ಕಮಲಗಳಿದ್ದವು. ಅವು ಭಾರತದ ಎಂಟು ಸಂಸ್ಥಾನಗಳನ್ನು ಪ್ರತಿನಿಧಿಸುತ್ತಿದ್ದವು. ಮಧ್ಯದ ಕೇಸರಿ ಬಣ್ಣದಲ್ಲಿ ದೇವನಾಗರಿ ಲಿಪಿಯಲ್ಲಿ ವಂದೇ ಮಾತರಂ ಎಂದು ಬರೆಯಲಾಗಿತ್ತು. ಕೆಳಗೆ ಕೆಂಪು ಬಣ್ಣದ ಒಂದು ತುದಿಯಲ್ಲಿ ಸೂರ್ಯ ಹಾಗೂ ಇನ್ನೊಂದು ತುದಿಯಲ್ಲಿ ಚಂದ್ರನಿದ್ದು. ಈ ಚಿಹ್ನೆಗಳು ಹಿಂದು ಹಾಗೂ ಮುಸಲ್ಮಾನ ಧರ್ಮಗಳನ್ನು ಪ್ರತಿನಿಧಿಸುತ್ತಿದ್ದವು. ತಮ್ಮ ಭಾಷಣದಲ್ಲಿ ಮೇಡಂ ಕಾಮಾ ಈ ಧ್ವಜದ ಮಹತ್ವದ ಬಗ್ಗೆ ವಿವರಿಸುತ್ತ, ಈ ಧ್ವಜ ಭಾರತದ ಸ್ವಾತಂತ್ರ ಹೋರಾಟದ ಪ್ರತೀಕವಾಗಿದೆ. ವಿಶ್ವದಲ್ಲಿ ಎಲ್ಲೇ ವಾಸವಾಗಿರಲಿ, ಹುಟ್ಟಿನಿಂದ ಭಾರತೀಯರಾದವರೆಲ್ಲ ನಾವು ಆರಂಭಿಸಿದ ರಾಷ್ಟ್ರೀಯ ಚಳುವಳಿಗೆ ಸಹಕಾರ ನೀಡಬೇಕು. 'ವಂದೇ ಮಾತರಂ' ಎಂಬುದು ನಮ್ಮ ಚಳವಳಿಯ ಧ್ಯೇಯವಾಗಬೇಕು ಎಂದು ಹೇಳಿದರು.

ಮೇಡಂ ಕಾಮಾ ಅವರು ರಾಷ್ಟ್ರೀಯ ಚಳವಳಿಯಲ್ಲಿ ತಮ್ಮ ಚಟುವಟಿಕೆಗಳನ್ನು ಅವ್ಯಾಹತವಾಗಿ ಮುಂದುವರರರೆಸಿಕೊಂಡು ಹೋದರು. ಭಯಭೀತರಾದ ಬ್ರಿಟಿಷ್ ಸರಕಾರ ಅವರನ್ನು ಭಾರತಕ್ಕೆ ಮರಳಿ ಕಳಿಸಬೇಕೆಂದು ಫ್ರೆಂಚ್ ಸರಕಾರವನ್ನು ವಿನಂತಿಸಿಕೊಂಡಿತು. ಆದರೆ ಪ್ರೆಂಚ್ ಸರಕಾರ ಬ್ರಿಟಿಷರ ಕೋರಿಕೆಯನ್ನು ನಿರಾಕರಿಸಿತು. ಇದರಿಂದ ಕೋಪಗೊಂಡ ಬ್ರಿಟಿಷ್ ಸರಕಾರ ಭಾರತದಲ್ಲಿದ್ದ ಕಾಮಾ ಅವರ ಆಸ್ತಿಯನ್ನು ಮುಟ್ಟುಗೋಲು ಹಾಕಿಕೊಂಡಿತು. ಮೇಡಂ ಕಾಮಾ ಅವರು 1935ರವರೆಗೂ ಯುರೋಪಿನಲ್ಲಿಯೇ ಇದ್ದರು. ಭಾರತಕ್ಕೆ ಬಂದರೆ ಅವರನ್ನು ಬಂಧಿಸುವ ಅಪಾಯವಿತ್ತು. ರಾಜಕೀಯ ದಣಿವರಿಯದ ಚಟುವಟಿಕೆಯಿಂದ ನಿಶ್ಯಕ್ತರಾಗಿ ಅವರಿಗೆ ಪಾರ್ಶ್ವವಾಯು ಉಂಟಾಯಿತು. ಮುಂದೆ ಬ್ರಿಟಿಷ್ ಸರಕಾರ ಕೆಲವು ಷರತ್ತುಗಳ ಮೇರೆಗೆ ಅವರನ್ನು ಭಾರತಕ್ಕೆ ಮರಳಿಸಬೇಕಾಯಿತು. ಭಾರತಕ್ಕಾಗಿ ಜನ, ನೆಲ, ಭಾಷೆಗಾಗಿ ಹಗಲಿರುಳು ದುಡಿದ ಮೇಡಂ ಕಾಮಾ 1936 ಆಗಸ್ಟ್ 13ರಂದು ನಿಧನರಾದರು.

– ಡಾ. ತಯಬಅಲಿ ಅ.ಹೊಂಬಳ.
ಗದಗ.

# ನಾವೆಲ್ಲರೂ ಒಂದೇ ಎಂಬ ಭಾವನೆ ಗಟ್ಟಿಯಾಗಲಿ

ಬೆಂಗಳೂರಿನ ಬಹುತೇಕ ಮಳಿಗೆಗಳು ಸೇರಿದಂತೆ ವ್ಯಾಪಾರ ಕೇಂದ್ರಗಳು ಸೇಲ್‌ಗಳ ಪೈಪೋಟಿಯಲ್ಲಿ ತೊಡಗಿವೆ. ದೊಡ್ಡ ದೊಡ್ಡ ಮಾಲ್‌ಗಳು ನವವಧುವಿನಂತೆ ಕಂಗೊಳಿಸುತ್ತ ಶೃಂಗಾರಗೊಂಡಿವೆ. ಒಂದು ಕೊಂಡರೆ ಇನ್ನೊಂದು ಉಚಿತ, ಅಷ್ಟು ರಿಯಾಯಿತಿ ಇಷ್ಟು ರಿಯಾಯಿತಿ, ಅದು ಕೊಂಡರೆ ಇದು ಉಚಿತ ಎಂಬ ಟಿವಿ ಜಾಹೀರಾತು ಮತ್ತು ಬ್ಯಾನರ್‌ಗಳಿಂದ ಪ್ರಚಾರ ಮಾಡುತ್ತಿವೆ. ಪ್ರತಿ ವರ್ಷ ಆಗಸ್ಟ್ 15ರಂದು ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ಸಡಗರ ಸಂಭ್ರಮದಿಂದ ಆಚರಿಸುತ್ತೇವೆ.

ನಾವೆಲ್ಲರೂ ಭಾರತೀಯರು ಎಂದು ಜಾತಿ, ಮತ, ಭೇದವಿಲ್ಲದೆ ಸಂಭ್ರಮಿಸುವ ದಿನವಿದು. ಇಂದು 77 ವಸಂತಗಳನ್ನು ಪೂರೈಸಿ 78ನೇ ಸ್ವಾತಂತ್ರೋತ್ಸವವನ್ನು ಆಚರಿಸುತ್ತಿದ್ದೇವೆ. ಈ ದಿನದಂದು ದೇಶಭಕ್ತಿಯ ಹಾಡುಗಳು, ಭಾಷಣಗಳು, ಕಲೆ ಸಂಸ್ಕೃತಿ ಮತ್ತು ಸಾಂಸ್ಕೃತಿಕ ಪರಂಪರೆಯನ್ನು ಸಾರುವ ವಿವಿಧ ರೀತಿಯ ಕಾರ್ಯಕ್ರಮಗಳು ನಡೆಯುತ್ತವೆ. ನಾವೆಲ್ಲರೂ ಭಾರತೀಯರು ಧರ್ಮ, ಜಾತಿ, ಭಾಷೆ ಕುಲ–ಗೋತ್ರ, ಬಡವ, ಶ್ರೀಮಂತ, ವಿದ್ಯಾವಂತ, ಅವಿದ್ಯಾವಂತ ಎಂಬ ಭೇದವಿಲ್ಲದೇ ನಮ್ಮ ಭಾರತ ದೇಶವನ್ನು ಪ್ರತಿಯೊಬ್ಬ ಪ್ರಜೆಯೂ ಪ್ರೀತಿಸುತ್ತಾನೆ, ಪ್ರೀತಿಸಲೇಬೇಕು. ಏಕೆಂದರೆ ನಮ್ಮ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಸ್ವಾತಂತ್ರ್ಯ ಹೋರಾಟಗಾರರು ತಮ್ಮ ಪ್ರಾಣಗಳನ್ನೇ ಬಲಿದಾನ ಮಾಡಿದ್ದಾರೆ.



ಸ್ವಾತಂತ್ರ್ಯಾನಂತರ ನಾವು ಸಾಕಷ್ಟು ಪ್ರಗತಿಯನ್ನು ಸಾಧಿಸಿದ್ದೇವೆ. ಕೃಷಿ ವಿದ್ಯೆ, ಆರೋಗ್ಯ, ಕೈಗಾರಿಕೆ, ಕಲೆ, ಸಂಸ್ಕೃತಿ, ವಿಜ್ಞಾನ, ತಂತ್ರಜ್ಞಾನ, ಸಿನಿಮಾ, ಕ್ರೀಡೆ ಇತ್ಯಾದಿ ರಂಗದಲ್ಲಿ ನಮ್ಮ ದೇಶ ಮುಂದುವರೆದ ರಾಷ್ಟ್ರಗಳ ಶ್ರೇಣಿಯಲ್ಲಿ ಇದೆ. ಪ್ರಗತಿ ಪಥದಲ್ಲಿರುವ ಈ ದೇಶದ ಪ್ರಗತಿಯೇ ನಮ್ಮ ಪ್ರಗತಿ ಎಂಬ ಭಾವನೆ ಸದಾ ನಮ್ಮಲ್ಲಿರಬೇಕು. 'ಸತ್ಯಮೇವ ಜಯತೇ' ಇದು ನಮ್ಮ ರಾಷ್ಟ್ರೀಯ ಧ್ಯೇಯವಾಕ್ಯ.

ಈ ಧ್ಯೇಯವಾಕ್ಯದ ಪರಿಪಾಲನೆ ಎಷ್ಟಾಗುತ್ತಿದೆ? ಸ್ವಾತಂತ್ರ್ಯ ಹೋರಾಟದಲ್ಲಿ ಅನೇಕ ಮಹಿಳೆಯರು ಕೂಡ ಹೋರಾಡಿದ್ದಾರೆ. ದೇಶವನ್ನು ಗೌರವಿಸುವ ನಾವು ಮಹಿಳೆಯರನ್ನು ಗೌರವಿಸಬೇಕು. ತಾಯಿ ಎಂಬ ಗೌರವ, ಮಗಳೆಂಬ ವಾತ್ಸಲ್ಯ, ಅತ್ತೆ ಎಂಬ ಅಭಿಮಾನ, ಸೊಸೆ ಎಂಬ ಪ್ರೀತಿ ಸಹೋದರ ಸಹೋದರಿಯರ ಪ್ರೀತಿ–ಬಾಂಧವ್ಯ, ನಾವು ಭಾರತೀಯರು ಎಂಬ ಒಗ್ಗಟ್ಟು ಹಾಗೂ ಏಕತೆಯನ್ನು ಪ್ರದರ್ಶಿಸಬೇಕಾಗಿದೆ. ಸ್ವಾತಂತ್ರ್ಯ ದಿನಾಚರಣೆ ಎನ್ನುವುದು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ ನಾವೆಲ್ಲರೂ ಒಂದೇ ಎಂಬ ಭಾವನೆಯನ್ನು ಗಟ್ಟಿಗೊಳಿಸೋಣ, ಸ್ವಾತಂತ್ರ್ಯ ದಿನಾಚರಣೆಯನ್ನು ಎಲ್ಲರೂ ಸಡಗರ–ಸಂಭ್ರಮದಿಂದ ಆಚರಿಸೋಣ.



– ವಿ.ಎಂ.ಎಸ್. ಗೋಪಿ.
ಬೆಂಗಳೂರು.

### ಕಾಂಗ್ರೆಸ್ ಕಾರ್ಯಾಲಯಕ್ಕೆ ಭೂಮಿಪೂಜೆ ನೆರವೇರಿಸಿದ ಶಾಸಕ ಜಿ.ಎಸ್. ಪಾಟೀಲ

# ಸರ್ವರ ಅಭಿವೃದ್ಧಿಗೆ ಕಾಂಗ್ರೆಸ್ ಬದ್ಧ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ದೇಶದ ರಕ್ಷಣೆ ಹಾಗೂ ಸರ್ವ ಸಮುದಾಯಗಳ ಅಭಿವೃದ್ಧಿ ಕಾರ್ಯಗಳ ತತ್ವ, ಸಿದ್ಧಾಂತಗಳಿಗೆ ಬದ್ಧವಾಗಿರುವ ಪಕ್ಷವಿದ್ದರೆ ಅದು ಕಾಂಗ್ರೆಸ್ ಪಕ್ಷ ಮಾತ್ರ ಎಂದು ಶಾಸಕ ಜಿ.ಎಸ್. ಪಾಟೀಲ ಹೇಳಿದರು.



ಪಟ್ಟಣದ ಕುಷ್ಟಗಿ ರಸ್ತೆಯಲ್ಲಿ ಬುಧವಾರ ಕಾಂಗ್ರೆಸ್ ಪಕ್ಷದ ಕಾರ್ಯಾಲಯಕ್ಕೆ ಭೂಮಿಪೂಜೆ ನೆರವೇರಿಸಿ ಮಾತನಾಡಿದ ಅವರು, ದೇಶಕ್ಕೆ ಸ್ವಾತಂತ್ರ್ಯ ಹೋರಾಟದಲ್ಲಿ ತನ್ನದೇ ಆದ ಕೊಡುಗೆಯನ್ನು ನೀಡಿರುವ ಕಾಂಗ್ರೆಸ್ ಪಕ್ಷವು ದೇಶದ ರಕ್ಷಣೆಗೆ ಕಟಿಬದ್ಧವಾಗಿ ಕೆಲಸ ಮಾಡುತ್ತಾ ಬಂದಿದೆ. ಪರಿಣಾಮ ದೇಶದ ವಿರುದ್ಧ ಕಾಲು ಕೆರೆದು ಬಂದ ವೈರಿ ರಾಷ್ಟ್ರಗಳ ಹೆಡೆಮುರಿ ಕಟ್ಟಿದ ಕೀರ್ತಿ ಕಾಂಗ್ರೆಸ್ ಸರ್ಕಾರಕ್ಕೆ ಸಲ್ಲುತ್ತದೆ.

ದೇಶಕ್ಕೆ ಸ್ವಾತಂತ್ರ್ಯಪೂರ್ವ ಹಾಗೂ ಸ್ವಾತಂತ್ರ್ಯಾನಂತರ ದೇಶಕ್ಕೆ ಕಾಂಗ್ರೆಸ್ ತನ್ನನ್ನು ಸಮರ್ಪಿಸಿಕೊಂಡು ಇಂದಿಗೂ ಸಹ ದೇಶದಲ್ಲಿನ ಸರ್ವ ಸಮುದಾಯಗಳ ಅಭಿವೃದ್ಧಿಗೆ ಶ್ರಮಿಸುತ್ತಿದೆ. ಇಂತಹ ಭವ್ಯ ಇತಿಹಾಸ ಹೊಂದಿರುವ ಕಾಂಗ್ರೆಸ್ ಪಕ್ಷದ ಕಟ್ಟಾಳು ಎನ್ನುವದಕ್ಕೆ ನನಗೆ ಹೆಮ್ಮೆಯಿದೆ. ನಮಗೆ ಭಾರತೀಯತೆ ಮತ್ತು ದೇಶಪ್ರೇಮದ ಪಾಠ ಕಲಿಸಲು ಬರುವವರು ಮೊದಲು ಕಾಂಗ್ರೆಸ್ ಪಕ್ಷದ ತ್ಯಾಗ ಹಾಗೂ ಬಲಿದಾನವನ್ನು ಸ್ಮರಿಸಲಿ ಎಂದರು.

ಈ ವೇಳೆ ಮಾಜಿ ಸಂಸದ ಆರ್.ಎಸ್. ಪಾಟೀಲ, ಸಿದ್ದಪ್ಪ ಬಂಡಿ, ವಿ.ಆರ್. ಗುಡಿಸಾಗರ, ಅಶೋಕ ಬಾಗಮಾರ, ಶ್ರೀಕಾಂತ ಅವಧೂತ, ಡಾ. ಆರ್.ಎಸ್. ಜೀರೆ, ರಾಜು ಸಾಂಗ್ಲೀಕರ, ಶರಣಪ್ಪ ಚಳಗೇರಿ, ರಫೀಕ್ ತೋರಗಲ್, ಬಸವರಾಜ ಹೂಗಾರ, ಶ್ರೀಧರ ಬಿದರಳ್ಳಿ, ಮುತ್ತಣ್ಣ ಮ್ಯಾಗೇರಿ, ಶರಣು ಪೂಜಾರ, ಅರ್ಜುನ ರಾಠೋಡ, ಅಪ್ಪು ಮತ್ತಿಕಟ್ಟಿ, ಸಿದ್ದು ಗೊಂಗಡಶೆಟ್ಟಿಮಠ ಮುಂತಾದವರಿದ್ದರು.

# ಕ್ಷತ್ರಿಯ ಸಮಾಜದವರು ಸ್ವಾಭಿಮಾನಿಗಳು




■ವಿಜಯಸಾಕ್ಷಿ ಸುದ್ದಿ, ಮುಳಗುಂದ

ಕ್ಷತ್ರಿಯ ಸಮಾಜ ಯಾವಾಗಲೂ ಸ್ವಾಭಿಮಾನದ ಬದುಕು ನಡೆಸಿದವರು ಎಂದು ಸಚಿವ ಡಾ. ಎಚ್.ಕೆ. ಪಾಟೀಲ್ ಹೇಳಿದರು.

ಅವರು ಪಟ್ಟಣದ ಸೋಮವಂಶ ಸಹಸ್ರಾರ್ಜುನ ಕ್ಷತ್ರಿಯ ಸಮಾಜ ಟ್ರಸ್ಟ್ ವತಿಯಿಂದ ಅಂಬಾಭವಾನಿ ದೇವಿಯ ನೂತನ ಮೂರ್ತಿ ಪ್ರತಿಷ್ಠಾಪನೆ, ಕಳಸಾರೋಹಣ ಹಾಗೂ ನೂತನ ಕಾರ್ಯಾಲಯ ಕಟ್ಟಡ ಉದ್ಘಾಟಿಸಿ ಮಾತನಾಡಿ, ಈ ಸಮಾಜ ಬಂಧುಗಳು ಯಾವಾಗಲೂ ಸ್ವಾಭಿಮಾನಿಗಳಾಗಿದ್ದು, ಸ್ವಂತ ದುಡಿಮೆಯಿಂದ ಬದುಕು ಕಟ್ಟಿಕೊಂಡು ಉತ್ತಮ ಜೀವನ ಸಾಗಿಸುವವರು, ಯಾವಾಗಲೂ ಕಾಯಕ ತತ್ವವನ್ನು ಮೈಗೂಡಿಸಿಕೊಂಡು ನಿತ್ಯ ಕಾಯಕ ಬದುಕು ನಡೆಸುವವರು ಎಂದರು.

ಪಿ.ಎಸ್. ಮರಿದೇವರಮಠ ಮಾತನಾಡಿ, ದೇವಿ ಆರಾಧನೆ ಮಾಡುವುದರಿಂದ ಶಾಂತಿ, ನೆಮ್ಮದಿ ಪ್ರಾಪ್ತಿಯಾಗುತ್ತದೆ. ಕ್ಷತ್ರೀಯ ಸಮಾಜದ ಬಂಧುಗಳು ಪ್ರತಿ ವರ್ಷ ಶ್ರಾವಣ ಮಾಸದಲ್ಲಿ ಹಾಗೂ ನವರಾತ್ರಿಯಲ್ಲಿ ಅಂಬಾಭವಾನಿ ದೇವಿಯ ಆರಾಧನೆಯನ್ನು ಶ್ರದ್ಧಾ ಭಕ್ತಿಯಿಂದ ನೆರವೇರಿಸುವವರು ಎಂದರು.

ದಿವ್ಯಸಾನಿಧ್ಯವನ್ನು ಮುಳಗುಂದ ಗವಿಮಠ ಹಾಗೂ ಧಾರವಾಡ ಮುರುಘಾಮಠದ ಮಲ್ಲಿಕಾರ್ಜುನ ಶ್ರೀಗಳು ವಹಿಸಿದ್ದರು. ನೇತೃತ್ವವನ್ನು ಅಲಮೇಲ ವಿರಕ್ತಮಠದ ಜಗದೇವ ಮಲ್ಲಿಭೂಮಯ್ಯ ಶ್ರೀಗಳು ವಹಿಸಿದ್ದರು.

ಸಮ್ಮುಖವನ್ನು ನೀಲಗುಂದ ಗುದ್ನೇಶ್ವರಮಠದ ಪ್ರಭುಲಿಂಗದೇವರು ವಹಿಸಿದ್ದರು. ಅಧ್ಯಕ್ಷತೆಯನ್ನು ಲಕ್ಷ್ಮಣಸಾ ಕಬಾಡೆ, ಎಸ್.ಎಂ. ನೀಲಗುಂದ, ಎಚ್.ಡಿ. ಬಟ್ಟೂರ, ಡಾ. ಎಸ್.ಸಿ. ಚವಡಿ, ರಾಮಣ್ಣಾ ಕಮಾಜಿ ಹಾಗೂ ಸಮಾಜದ ಮುಖಂಡರು ಇದ್ದರು.

### ಶಿರಹಟ್ಟಿ ತಾ.ಪಂ ಸಾಮಾನ್ಯ ಸಭೆಯಲ್ಲಿ ಎನ್.ಕೆ. ನಿರ್ಮಲಾ ಅಸಮಾಧಾನ

# ಕಾಟಾಚಾರಕ್ಕೆ ಬಂದು ಹೋಗಬೇಡಿ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಸರಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳ ಸಂಪೂರ್ಣ ಮಾಹಿತಿಯನ್ನು ಸಭೆಗೆ ತರದೇ ಇದ್ದರೆ ಹೇಗೆ? ಇನ್ನೂ ಕೆಲ ಇಲಾಖೆಗಳ ಸಹಾಯಕರು ಸಭೆಗೆ ಆಗಮಿಸಿದ್ದೀರಿ, ಹೀಗಾದರೆ ಸಭೆ ಹೇಗೆ ನಡೆಸುವುದು ಎಂದು ಜಿ.ಪಂ ಮುಖ್ಯ ಯೋಜನಾಧಿಕಾರಿ ಹಾಗೂ ತಾ.ಪಂ ಆಡಳಿತಾಧಿಕಾರಿ ಎನ್.ಕೆ. ನಿರ್ಮಲಾ ಅಸಮಾಧಾನ ವ್ಯಕ್ತಪಡಿಸಿದರು.

ಅವರು ಬುಧವಾರ ಶಿರಹಟ್ಟಿಯ ತಾ.ಪಂ ಸಭಾಭವನದಲ್ಲಿ ಜರುಗಿದ ಸಾಮಾನ್ಯ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕಾಟಾಚಾರಕ್ಕೆ ಬಂದು ಹೋಗಬೇಡಿ: ತಾಲೂಕಿನ ಎಲ್ಲ ಇಲಾಖೆಯ ಅನುಷ್ಠಾನಾಧಿಕಾರಿಗಳು ಸಭೆಗೆ ಕೇಂದ್ರ ಹಾಗೂ ರಾಜ್ಯ ಸರಕಾರಗಳ ಎಲ್ಲ ಯೋಜನೆಗಳ ಸಂಪೂರ್ಣ ಮಾಹಿತಿಯನ್ನು ನೀಡಬೇಕು. ಕೆಲವು ಇಲಾಖೆಯವರು ಸರಿಯಾಗಿ ಮಾಹಿತಿಯನ್ನೇ ನೀಡುತ್ತಿಲ್ಲ. ಇದರಿಂದ ಹೇಗೆ ಪ್ರಗತಿ ಸಾಧಿಸಲು ಸಾಧ್ಯವಾಗುತ್ತದೆ,




ಕಾಟಾಚಾರಕ್ಕೆ ಸಭೆಗೆ ಬಂದು ಹೋಗಬೇಡಿ. ಕಚೇರಿಯಲ್ಲಿದ್ದರೆ ಕೆಲಸ ಮಾಡಬೇಕಾಗುತ್ತದೆ ಎಂದು ಸಭೆಗೆ ಹಾಜರಾಗಿ ಕಾಲಹರಣ ಮಾಡುವುದು ಸರಿಯಲ್ಲ ಎಂದು ಅಧಿಕಾರಿಗಳ ಕಾರ್ಯವೈಖರಿಗೆ ಆಡಳಿತಾಧಿಕಾರಿ ಬೇಸರ ವ್ಯಕ್ತಪಡಿಸಿದರು.

ನೋಟೀಸ್ ನೀಡುವುದಕ್ಕೆ ಸೀಮೀತವಾದ ಸಭೆ: ತಾಲೂಕಿನ ಪ್ರಗತಿ ಬಗ್ಗೆ ನಡೆಯಬೇಕಿದ್ದ ಸಾಮಾನ್ಯ ಸಭೆಯು ಅಧಿಕಾರಿಗಳ ಗೈರು, ಸಹಾಯಕರ ಉಪಸ್ಥಿತಿ, ಪ್ರಗತಿ ವರದಿ ನೀಡದೇ ಇರುವುದು, ಅಪೂರ್ಣ ಮಾಹಿತಿ ನೀಡಿರುವುದು ಸೇರಿದಂತೆ ಹಲವು ಸಮಸ್ಯೆಗಳ ನಡುವೆಯೇ ಪ್ರಾರಂಭವಾದ ಸಾಮಾನ್ಯ ಸಭೆಯು ಅಂತಿಮವಾಗಿ ನೋಟೀಸ್ ನೀಡುವುದಕ್ಕೆ ಮಾತ್ರ ಸೀಮೀತವಾದಂತಾಯಿತೇ ಎಂಬ ಭಾವನೆ ವ್ಯಕ್ತವಾಗುತ್ತಿತ್ತು. ಆಡಳಿತಾಧಿಕಾರಿಗಳು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಸಭೆಗೆ ಮುಂಚಿತವಾಗಿಯೇ ನೋಟೀಸ್ ನೀಡಿದರೂ ಸಹ ಮತ್ತೆ ಮತ್ತೆ ಸಭೆಯಲ್ಲಿ ಇಂತಹುದಕ್ಕೆ ಸಮಯ ವ್ಯರ್ಥವಾಗುತ್ತಿರುವದಂತೂ ಸತ್ಯ.

ತಾಪಂ ಇಓ ಎಸ್.ಎಸ್. ಕಲ್ಮನಿ, ಎಡಿಎ ರೇವಣೆಪ್ಪ ಮನಗೂಳಿ, ಬಿಸಿಎಂನ ಮರಿಗೌಡ ಸುರಕೋಡ, ಆರ್‌ಎಫ್‌ಓ ಕೌಶಿಕ ದಳವಾಯಿ, ರಾಮಪ್ಪ ಪೂಜಾರ, ಪಿಆರ್‌ಇಡಿ ಮಾರುತಿ ರಾಠೋಡ ಮುಂತಾದ ಅಧಿಕಾರಿಗಳು ಉಪಸ್ಥಿತರಿದ್ದರು.

ತಾ.ಪಂನಲ್ಲಿ ನಡೆಯುವ ಪ್ರಗತಿ ಪರಿಶೀಲನಾ ಸಭೆಗೆ ಇನ್ನು ಮುಂದೆ ಸರಕಾರದ ಗ್ಯಾರಂಟಿ ಯೋಜನೆಗಳ ಸಂಪೂರ್ಣ ಮಾಹಿತಿಯನ್ನು ಕಡ್ಡಾಯವಾಗಿ ತರಬೇಕು ಎಂದು ಹೆಸ್ಕಾಂ, ಶಿಶು ಅಭಿವೃದ್ಧಿ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಿದರು. ಆಹಾರ ಮತ್ತು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ನೋಟೀಸ್ ಜಾರಿ ಮಾಡುವಂತೆ ತಾ.ಪಂ ಇಓ ಅವರಿಗೆ ಸೂಚಿಸಿದರು.

# ಜಿಲ್ಲಾ ಕಾಂಗ್ರೆಸ್‌ನಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ

■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಜಿಲ್ಲಾ ಕಾಂಗ್ರೆಸ್ ಕಾರ್ಯಾಲಯದಲ್ಲಿ ಆ.15ರಂದು ಗುರುವಾರ ಬೆಳಿಗ್ಗೆ 8 ಗಂಟೆಗೆ 78ನೇ ಸ್ವಾತಂತ್ರೋತ್ಸವ ದಿನಾಚರಣೆ ಆಯೋಜಿಸಲಾಗಿದೆ.

ಕಾಂರ್ಯಕ್ರಮದ ಧ್ವಜಾರೋಹಣವನ್ನು ಗದಗ ಜಿಲ್ಲಾ ಕಾಂಗ್ರೆಸ್ ಕಮಿಟಿಯ ಅಧ್ಯಕ್ಷರೂ ಆಗಿರುವ, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ ನೆರವೇರಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ, ಪ್ರವಾಸೋದ್ಯಮ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ, ಮಾಜಿ ಶಾಸಕರಾದ ಡಿ.ಆರ್. ಪಾಟೀಲ, ಬಿ.ಆರ್. ಯಾವಗಲ್, ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ, ಪಕ್ಷದ ಮುಖಂಡರಾದ ಆನಂದಸ್ವಾಮಿ ಗಡ್ಡದೇವರಮಠ, ಸುಜಾತಾ ದೊಡ್ಡಮನಿ ಆಗಮಿಸುವರು.

ಈ ಕಾರ್ಯಕ್ರಮಕ್ಕೆ ಕಾಂಗ್ರೆಸ್ ಪಕ್ಷದ ಮಾಜಿ ಹಾಗೂ ಹಾಲಿ ಶಾಸಕರು, ಪಕ್ಷದ ಜಿಲ್ಲಾ ಪಧಾದಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು, ಜಿಲ್ಲಾ-ತಾಲೂಕು ಪಂಚಾಯತ, ಪಂಚಾಯತ, ಎಪಿಎಂಸಿ ಪಕ್ಷದ ಅಧ್ಯಕ್ಷರು ಹಾಗೂ ಸದಸ್ಯರು, ನಗರಸಭೆ, ಪಟ್ಟಣ ಪಂಚಾಯಿತಿ, ಪುರಸಭೆ ಅಧ್ಯಕ್ಷರು ಹಾಗೂ ಸದಸ್ಯರು, ಮಹಿಳಾ ಕಾಂಗ್ರೆಸ್, ಯುವ ಕಾಂಗ್ರೆಸ್, ಎಸ್‌ಸಿ/ಎಸ್‌ಟಿ, ಅಲ್ಪಸಂಖ್ಯಾತರ, ವಿದ್ಯಾರ್ಥಿ ಕಾಂಗ್ರೆಸ್, ಕಾಂಗ್ರೆಸ್ ಸೇವಾದಳ, ಹಿಂದುಳಿದ ವರ್ಗ, ಸಾಮಾಜಿಕ ಜಾಲತಾಣ, ರಾಜೀವಗಾಂಧಿ ಪಂಚಾಯತ ಸಂಘಟನೆ, ಮಾಜಿ ಸೈನಿಕರ ವಿಭಾಗ, ಮೀನುಗಾರ ವಿಭಾಗ, ಕಾರ್ಮಿಕರ ವಿಭಾಗ, ಐಎನ್‌ಟಿಯುಸಿ ಕಾನೂನು ಮತ್ತು ಮಾನವ ಹಕ್ಕು ವಿಭಾಗ, ಕಿಸಾನ್ ಮತ್ತು ಖೇತ್ ಮಜದೂರ ವಿಭಾಗ, ಮಾಜಿ ಸೈನಿಕರ ವಿಭಾಗ, ವೈದ್ಯರ ವಿಭಾಗ, ವೃತ್ತಿಪರ ವಿಭಾಗ, ಪದವೀಧರ ಹಾಗೂ ಶಿಕ್ಷಕರ ವಿಭಾಗ, ನೀತಿ ಮತ್ತು ಸಂಶೋಧನೆ ತರಬೇತಿ ವಿಭಾಗ, ವಿಕಲಚೇತನರ ವಿಭಾಗ, ಲೀಗಲ್ ರಿಫಾರ್ಮ್ಸ್ ವಿಭಾಗ, ಐಟಿ ಮತ್ತು ಡಾಟಾ ವಿಭಾಗ, ಮಾಧ್ಯಮ ಮತ್ತು ಸಂಪರ್ಕ ಇಲಾಖೆ ವಿಭಾಗ, ಪಕ್ಷದ ಅಭಿಮಾನಿಗಳು ಪಾಲ್ಗೊಳ್ಳಬೇಕೆಂದು ಗದಗ-ಬೆಟಗೇರಿ ಶಹರ ಕಾಂಗ್ರೆಸ ಸಮಿತಿಯ ಅಧ್ಯಕ್ಷ ಬಿ.ಬಿ. ಅಸೂಟಿ ಹಾಗೂ ಗದಗ ಜಿಲ್ಲಾ ಯುವ ಕಾಂಗ್ರೆಸ್ ಅಧ್ಯಕ್ಷ ಅಶೋಕ ಮಂದಾಲಿಯವರು ಪ್ರಕಟಣೆಯಲ್ಲಿ ವಿನಂತಿಸಿದ್ದಾರೆ.

# ಬಿಕಾಂ 1ನೇ ಸೆಮಿಸ್ಟರ್ ಪರೀಕ್ಷೆ ಫಲಿತಾಂಶ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಮನೋರಮಾ ಮಹಾವಿದ್ಯಾಲಯದ ಶೈಕ್ಷಣಿಕ ಸಾಲಿನ ಬಿಕಾಂ ವಿಭಾಗದ 1ನೇ ಸೆಮಿಸ್ಟರ್ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳಾದ ಸಂಜನಾ ಅಕ್ಷಯ ಕುರಾ (675) ಪ್ರಥಮ, ಸ್ಟಾಕ್ ಮಾರ್ಕೆಟ್ ಆಪರೇಷನ್ಸ್ ಮತ್ತು ಪ್ರಿನ್ಸಿಪಲ್ಸ್ ಆಫ್ ಮಾರ್ಕೆಟಿಂಗ್ ವಿಷಯಗಳಲ್ಲಿ 100ಕ್ಕೆ 100 ಅಂಕ ಪಡೆದಿದ್ದಾಳೆ. ಸುನೈನಾ ಕಡಕೋಳ (648) ದ್ವಿತೀಯ, ಶ್ರಾವಣಿ ಖಾನಾಪೂರ (621) ಮೂರನೇ ಸ್ಥಾನ, ವೈಭವ ಯಜಮಾನ (602) ನಾಲ್ಕನೇಯ ಸ್ಥಾನ, ಮಧು ಹಾದಿಮನಿ (584) ಅಂಕ ಪಡೆದು ಐದನೇ ಸ್ಥಾನ ಪಡೆದುಕೊಂಡಿದ್ದಾರೆ.

ಮಹಾವಿದ್ಯಾಲಯಕ್ಕೆ ಕೀರ್ತಿ ತಂದ ವಿದ್ಯಾರ್ಥಿಗಳ ಸಾಧನೆಯನ್ನು ಸಂಸ್ಥೆಯ ಚೇರಮನ್ ಎನ್.ಎಮ್. ಕುಡತರಕರ, ಪ್ರಾಚಾರ್ಯ ಬಿ.ಎಸ್. ಹಿರೇಮಠ, ಸಂಸ್ಥೆಯ ಕಾರ್ಯದರ್ಶಿ ಮಂಜುನಾಥ ಕುಡತರಕರ, ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕರಾದ ಸಂಜಯ ಕುಡತರಕರ, ಚೇತನ ಕುಡತರಕರ, ಸಂಯೋಜಕರಾದ ಪ್ರೊ. ಅಲ್ವಿನಾ ಡಿ ಹಾಗೂ ಸಿಬ್ಬಂದಿ ವರ್ಗದವರು ಶ್ಲಾಘಿಸಿದ್ದಾರೆ.

# ಕಾನೂನು ಮಹಾವಿದ್ಯಾಲಯದ ವಿವಿಧ ಚಟುವಟಿಕೆಗಳ ಸಮಾರೋಪ

■ವಿಜಯಸಾಕ್ಷಿ ಸುದ್ದಿ, ಗದಗ

ಹುಲಕೋಟಿ ಶಿಕ್ಷಣ ಸಂಸ್ಥೆಯ ಕಾನೂನು ಮಹಾವಿದ್ಯಾಲಯದ ಶೈಕ್ಷಣಿಕ, ಸಾಂಸ್ಕೃತಿಕ, ಕ್ರೀಡಾ ಹಾಗೂ ಎನ್.ಎಸ್.ಎಸ್. ಚಟುವಟಿಕೆಗಳ ಸಮಾರೋಪ ಮತ್ತು ಅಂತಿಮ ವರ್ಷದ ವಿದ್ಯಾರ್ಥಿಗಳ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು.



ಸಮಾರಂಭಕ್ಕೆ ಮುಖ್ಯ ಅತಿಥಿಗಳಾಗಿ ಆಗಮಿಸಿದ ಪೊಲೀಸ್ ವರಿಷ್ಠಾಧಿಕಾರಿ ಬಿ.ಎ. ನೇಮಗೌಡ ಮಾತನಾಡಿ, ಪೊಲೀಸರು ಮತ್ತು ವಕೀಲರು ಒಂದೇ ಸಮಾಜದ ಮುಖ್ಯ ವಿಭಾಗಗಳು. ಎಲ್ಲರೂ ಒಟ್ಟಿಗೆ ಶ್ರಮಿಸಿ ಕೆಲಸ ಮಾಡಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗಲು ಸಾಧ್ಯವಾಗುತ್ತದೆ. ಶಿಸ್ತು, ಸಮಯ ಪಾಲನೆ ವಿದ್ಯಾರ್ಥಿ ಜೀವನದ ಅತ್ಯವಶ್ಯಕ ಅಂಶಗಳು ಎಂದು ತಿಳಿಸಿದರು.

ಯುವ ಮುಖಂಡ ಕೃಷ್ಣಗೌಡ ಎಚ್.ಪಾಟೀಲ ಮಾತನಾಡಿ, ಜಗತ್ತಿನಲ್ಲಿ ತನ್ನ ವ್ಯಕ್ತಿತ್ವ ಗುರುತಿಸಿಕೊಳ್ಳುವುದು ಅತ್ಯವಶ್ಯಕ ಹಾಗೂ ಇಂದಿನ ದಿನಗಳಲ್ಲಿ ತಾಂತ್ರಿಕತೆಯ ಜ್ಞಾನದ ಅರಿವು ಪ್ರತಿಯೊಬ್ಬ ವಿದ್ಯಾರ್ಥಿಗೆ ಇರುವುದು ಮುಖ್ಯ ಎಂದರು.

ಸಂಸ್ಥೆಯ ಅಧ್ಯಕ್ಷ ರವಿ ಮೂಲಿಮನಿ ಮಾತನಾಡಿ, ಜೀವನದಲ್ಲಿ ಕಾನೂನು ಅರಿವು ಪ್ರತಿಯೊಬ್ಬ ಪ್ರಜೆಗೆ ಅತ್ಯಗತ್ಯ ಎಂದರಲ್ಲದೆ, ಅಂತಿಮ ವರ್ಷದ ಕಾನೂನು ವಿದ್ಯಾರ್ಥಿಗಳಿಗೆ ಒಳ್ಳೆಯ ವಕೀಲರಾಗುವಂತೆ ಆಶಿಸಿದರು. ಕಾನೂನು ಮಹಾವಿದ್ಯಾಲಯದ ಅಧ್ಯಕ್ಷ ಎಸ್.ಕೆ. ಪಾಟೀಲ ಮಾತನಾಡಿ, ಓದಿನೊಂದಿಗೆ ವಿದ್ಯಾರ್ಥಿಗಳು ಕ್ರೀಡೆ, ಸಾಂಸ್ಕೃತಿಕ ಇತರೆ ಎಲ್ಲಾ ಚಟುವಟಿಕೆಗಳಲ್ಲಿ ಭಾಗವಹಿಸಲು ತಿಳಿಸಿದರು. ಸಮಾರಂಭದಲ್ಲಿ ಮಹಾವಿದ್ಯಾಲಯದ ಉಪಾಧ್ಯಕ್ಷ ಎಸ್.ಕೆ. ನದಾಫ್, ಪ್ರಾಚಾರ್ಯರಾದ ಪಲ್ಲವಿ ಬುಯ್ಯಾರ, ಸಿಬ್ಬಂದಿ ವರ್ಗದವರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಎಸ್‌ಪಿ ಬಿ.ಎಸ್. ನೇಮಗೌಡ, ಕೃಷ್ಣಗೌಡ ಎಚ್.ಪಾಟೀಲ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ವರ್ಷದ ಅತ್ಯುತ್ತಮ ವಿದ್ಯಾರ್ಥಿ ಪ್ರಶಸ್ತಿಯನ್ನು ಯಶ್ ರೈಕರ, ಪ್ರೇಮಲೇಖ ಹಾಗೂ ಶೇಖರ ಇವರಿಗೆ ನೀಡಲಾಯಿತು.

# ದೇಶ ಭಕ್ತಿಗೀತೆಗಳ ರಸದೌತಣ

■ವಿಜಯಸಾಕ್ಷಿ ಸುದ್ದಿ, ಗದಗ

ಪೊಲೀಸ್ ಅಧಿಕಾರಿ, ಸಿಬ್ಬಂದಿಗಳಿಗೆ ಹಾಗೂ ಕುಟುಂಬ ವರ್ಗದವರಿಗೆ ಸಾಂಸ್ಕೃತಿಕ ಮನರಂಜನಾ ಕಾರ್ಯಕ್ರಮ ಪ್ರಯುಕ್ತ ದಿ ಸಂಡೇ ಬ್ಯಾಂಡ್ ಇವರಿಂದ ದೇಶ ಭಕ್ತಿಗೀತೆಗಳ ರಸದೌತಣವನ್ನು ಆಗಸ್ಟ್ 15ರಂದು ಸಂಜೆ 5 ಗಂಟೆಗೆ ನಗರದ ಭಾರತರತ್ನ ಪಂಡಿತ ಭೀಮಸೇನ ಜೋಶಿ ಜಿಲ್ಲಾ ರಂಗಮಂದಿರದಲ್ಲಿ ಹಮ್ಮಿಕೊಳ್ಳಲಾಗಿದೆ.


ಪರಮಪದ ಇವರಿಂದ ಸಂಗೀತ ಸಂಜೆ ಹಾಗೂ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿ ವರ್ಗದವರ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಲಿದ್ದು, ಗದಗ ಜಿಲ್ಲೆ ಪೊಲೀಸ್ ಅಧೀಕ್ಷಕರು ಸರ್ವರಿಗೂ ಸ್ವಾಗತ ಕೋರಿದ್ದಾರೆ.


# ಸ್ವಾತಂತ್ರ್ಯೋತ್ಸವ ದಿನದ ಕಾರ್ಯಕ್ರಮಗಳು

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾಡಳಿತದಿಂದ ಸ್ವಾತಂತ್ರ್ಯೋತ್ಸವ ದಿನಾಚರಣೆ ಪ್ರಯುಕ್ತ ಆಗಸ್ಟ್ 15ರಂದು ಬೆಳಿಗ್ಗೆ 9 ಗಂಟೆಗೆ ನಗರದ ಕೆ.ಎಚ್. ಪಾಟೀಲ ಜಿಲ್ಲಾ ಕ್ರೀಡಾಂಗಣದಲ್ಲಿ ಸಾರ್ವಜನಿಕ ಧ್ವಜಾರೋಹಣ ಕಾರ್ಯಕ್ರಮ ಜರುಗಲಿದೆ.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ರಾಷ್ಟ್ರ ಧ್ವಜಾರೋಹಣ ನೆರವೇರಿಸುವರು. ಮುಖ್ಯ ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಸದಸ್ಯರಾದ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಬಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ, ಸಂಸದರುಗಳಾದ ಪಿ.ಸಿ. ಗದ್ದಿಗೌಡರ, ವಿಧಾನ ಪರಿಷತ್ ಸದಸ್ಯರಾದ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ್, ನರಗುಂದ ಶಾಸಕರಾದ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕರಾದ ಡಾ. ಚಂದ್ರು ಲಮಾಣಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಅಕಬರಸಾಬ ಬಬರ್ಜಿ ಆಗಮಿಸುವರು. ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಹಾಗೂ ಕಾನೂನು ಮಾಪನ ಶಾಸ್ತ್ರ ಇಲಾಖೆಯ ಕಾರ್ಯದರ್ಶಿಗಳು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿಗಳಾದ ರಮಣದೀಪ್ ಚೌಧರಿ, ಜಿಲ್ಲಾಧಿಕಾರಿ ಗೋವಿಂದರೆಡ್ಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಬಿ.ಎಸ್. ನೇಮಗೌಡ ಸರ್ವರಿಗೂ ಸ್ವಾಗತ ಕೋರಿದ್ದಾರೆ.







VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka